# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103

ಸಂಖ್ಯೆ:ತುವಿ:ಶೈವಿ:UG:2024-25:/2225 ದಿನಾಂಕ:27.09.2024

## ಅಧಿಸೂಚನೆ

ವಿಷಯ:- 2024-25ನೇ ಶೈಕ್ಷಣಿಕ ಸಾಲಿಗೆ ನಾಲ್ಕನೇ ವರ್ಷದ ಸ್ನಾತಕ ಹಾನರ್ಸ್ ಪದವಿ ಅಧ್ಯಯನಕ್ಕೆ ಇಚ್ಚಿಸಿರುವ ವಿದ್ಯಾರ್ಥಿಗಳು ಪ್ರವೇಶಾತಿಯನ್ನು ಪಡೆಯುಲು ಅಧಿಸೂಚನೆ ಹೊರಡಿಸುತ್ತಿರುವ ಕುರಿತು.

ಉಲ್ಲೇಖ:- 1) ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ (ವಿಶ್ವವಿದ್ಯಾನಿಲಯಗಳು) ಆದೇಶ ಸಂಖ್ಯೆ:ಇಡಿ:166:ಯುಎನ್ಇ:2023 ಬೆಂಗಳೂರು ದಿನಾಂಕ:08.05.2024.

2) ವಿವಿ ಸುತ್ತೋಲೆ ಪತ್ರ ಸಂಖ್ಯೆ: ತುವಿ:ಶೈವಿ:2024-25/1157 ದಿನಾಂಕ:14.06.2024.

3) ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:27.09.2024.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (01)ರ ಸರ್ಕಾರದ ಆದೇಶಾನುಸಾರ 2024-25 ನೇ ಶೈಕ್ಷಣಿಕ ಸಾಲಿನಿಂದ ರಾಜ್ಯಶಿಕ್ಷಣ ನೀತಿ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಹಿಂದಿನ ಸಾಲಿನಲ್ಲಿ NEP-2020 ಅಡಿಯಲ್ಲಿ ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳು 2024-25ನೇ ಶೈಕ್ಷಣಿಕ ಸಾಲಿನ ನಾಲ್ಕನೇ ವರ್ಷದ ಸ್ನಾತಕ ಹಾನರ್ಸ್ ಪದವಿ ಅಧ್ಯಯನಕ್ಕೆ ಇಚ್ಚಿಸಿರುವ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳ ಅಂಕಿ-ಅಂಶಗಳ ಮಾಹಿತಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಉಲ್ಲೇಖ (02)ರಲ್ಲಿ ತಿಳಿಸಲಾಗಿತ್ತು. ಸದರಿ ಪತ್ರದನ್ವಯದಂತೆ ಕೆಲವು ಕಾಲೇಜುಗಳು ಮಾತ್ರ ನಾಲ್ಕನೇ ವರ್ಷದ ಸ್ನಾತಕ ಹಾನರ್ಸ್ ಪದವಿಗೆ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳ ಮಾಹಿತಿಯನ್ನು ಸಲ್ಲಿಸಿರುತ್ತಾರೆ. ಸದರಿ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಹಿತದೃಷ್ಠಿಯಿಂದ ಪ್ರಯೋಗಾಲಯ ಹಾಗೂ ಮೂಲಭೂತ ಸೌಕರ್ಯವನ್ನು ವಿಶ್ವವಿದ್ಯಾನಿಲಯವು ಪರಿಶೀಲಿಸಿ, ಆಸಕ್ತ ವಿದ್ಯಾರ್ಥಿಗಳು ರಸಾಯನಶಾಸ್ತ್ರ, ಗಣಿತಶಾಸ್ತ್ರ, ಬಿಸಿಎ ಮತ್ತು ಬಿ.ಕಾಂ ಕೋರ್ಸುಗಳಿಗೆ ಹಾನರ್ಸ್ ಪದವಿ ಪ್ರವೇಶ ಪಡೆಯಲು ಈ ಮೂಲಕ ಅಧಿಸೂಚಿಸಲಾಗಿದೆ.

| ಕ್ರ.ಸಂ | ಕಾಲೇಜು ವಿವರ | ಕೋರ್ಸ್ ವಿವರ |
|---|---|---|
| 1 | ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು | ರಸಾಯನಶಾಸ್ತ್ರ, ಗಣಿತಶಾಸ್ತ್ರ ಮತ್ತು ಬಿಸಿಎ |
| 2 | ವಿಶ್ವವಿದ್ಯಾನಿಲಯ ಕಲಾ ಕಾಲೇಜು | ಬಿ.ಕಾಂ |

ಮುಂದುವರೆದಂತೆ, ಪ್ರವೇಶಾತಿಯ ಕೊನೆಯ ದಿನಾಂಕ ಹಾಗೂ ಪ್ರವೇಶಾತಿಯ ಶುಲ್ಕವನ್ನು ನಂತರದ ದಿನಗಳಲ್ಲಿ ತಿಳಿಸಲಾಗುವುದು.

ಹೆಚ್ಚಿನ ವಿವರಗಳಿಗೆ ಸದರಿ ಕಾಲೇಜುಗಳ ಪ್ರಾಂಶುಪಾಲರುಗಳನ್ನು ನೇರವಾಗಿ ಸಂಪರ್ಕಿಸುವುದು

ಆದೇಶದ ಮೇರೆಗೆ,

27/09/2024

ಉಪಕುಲಸಚಿವರು

ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಇವರಿಗೆ

1. ಎಲ್ಲಾ ಪ್ರಾಂಶುಪಾಲರು, ಘಟಕ ಹಾಗೂ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು - ಜಾಲತಾಣದಲ್ಲಿ ಪ್ರಕಟಿಸುವುದು ಮತ್ತು ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಇ-ಮೇಲ್ ಕಳುಹಿಸುವುದು.

ಪ್ರತಿಗಳು:

1. ಕುಲಸಚಿವರು (ಮೌಲ್ಯಮಾಪನ) ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಕಛೇರಿ ಪ್ರತಿ.